

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಕ್ಷಿಣ ವಲಯ, ವಿಜಯನಗರ ಉಪ ವಿಭಾಗ

## ವಾರ್ಡ್ ನಂ. 157 : ವಿಜಯನಗರ

ದಿನಾಂಕ: 17.09.2022 ರಂದು 11.00 ಗಂಟೆಗೆ ಶ್ರೀ.ಡಿ.ಕೆ ಬಾಬು ನೋಡಲ್ ಅಧಿಕಾರಿ, ವಾರ್ಡ್ ನಂ.157 (ಹಳೆಯ ವಾರ್ಡ್ ನಂ. 123) ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿಜಯನಗರ ಉಪ ವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು.

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1. | ಶ್ರೀ.ಡಿ.ಕೆ ಬಾಬು | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ. |
| 2. | ಶ್ರೀ.ಎಸ್.ಕೆ.ಹೇಮಂತ್ ಕುಮಾರ್ | ಸದಸ್ಯ ಕಾರ್ಯದರ್ಶಿ ವಾರ್ಡ್ ಸಂಖ್ಯೆ: 157. |
| 3. | ಶ್ರೀಮತಿ.ಸುಜಾತ | ಹಿರಿಯ ಆರೋಗ್ಯ ಪರಿವೀಕ್ಷಕರು. |
| 4. | ಶ್ರೀಮತಿ.ಸಪ್ನ | ಕಿರಿಯ ಆರೋಗ್ಯ ಪರಿವೀಕ್ಷಕರು. |
| 5. | ಶ್ರೀಮತಿ.ಸುಮಿತ್ರ ಬಿ.ಎಸ್ | ಮೌಲ್ಯಮಾಪಕರು. |
| 6. | ಶ್ರೀ.ಲಿಂಗಯ್ಯ.ಎಂ | ಆರ್.ಐ ವಾ–157. |
| 7. | ಶ್ರೀ.ನರಸಿಂಹ. | ತೋಟಗಾರಿಕೆ ಇಲಾಖೆ ವಾ–157. |
| 8. | ಶ್ರೀ.ಸುಬ್ರಮಣಿ | ವಾ–157. |
| 9. | ಶ್ರೀ.ಟಿ.ಆರ್.ಶ್ರೀನಿವಾಸ್ | ವಾ–157. |
| 10. | ಶ್ರೀಮತಿ.ಸರಸ್ವತಿ | L/ W ವಾ–157. |
| 11. | ಶ್ರೀಮತಿ.ನಾಗರತ್ನಮ್ಮ | L/W ವಾ–157. |
| 12. | ಶ್ರೀ.ಮಂಜು. | Marshal ವಾ–157. |
| 13. | ಶ್ರೀ.ಕುಮಾರ್ | ವಾ–157. |
| 14. | ಕುಮಾರಿ.ವಿದ್ಯಾ ಹಿರೇಮಠ | NGO |

### : ನಡಾವಳಿಯ ವರದಿ :

ಕಾರ್ಯದರ್ಶಿಗಳಾದ ಶ್ರೀ.ಎಸ್.ಕೆ.ಹೇಮಂತ್ ಕುಮಾರ್ ರವರು ಸಭೆಗೆ ಹಾಜರಾದ ನೋಡಲ್ ಅಧಿಕಾರಿಯವರಿಗೆ ಹಾಗೂ ಅಧಿಕಾರಿಗಳು ಮತ್ತು ನೌಕರರಿಗೆ ಸ್ವಾಗತ ಕೋರಿದರು.

1. ವಾರ್ಡ್ ವ್ಯಾಪ್ತಿಯಲ್ಲಿ Blockspot ಗಳಾದ ಟೆಂಟ್ ರಸ್ತೆ, 7ನೇ ಕ್ರಾಸ್ ಮಂಜುನಾಥನಗರ ರಸ್ತೆಯಲ್ಲಿ ಘನತ್ಯಾಜ್ಯವನ್ನು ತೆರವುಗೊಳಿಸಿರುವುದಾಗಿ ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯ ಗಮನಕ್ಕೆ ತಂದರು.
2. GT Mall ಕಂದಾಯ ವಸೂಲಾತಿ ಬಗ್ಗೆ ಚರ್ಚಿಸಲಾಗಿ, ನ್ಯಾಯಾಲಯದಲ್ಲಿ ಹೂಡಿರುವ ದಾವೆಯ ಬಗ್ಗೆ ಮುಂದಿನ ಸಭೆಯಲ್ಲಿ ಮಾಹಿತಿ ನೀಡಲು ಕಂದಾಯ ಅಧಿಕಾರಿಗಳಿಗೆ ನೋಡಲ್ ಅಧಿಕಾರಿ ರವರು ಸೂಚಿಸಿದರು.
3. ಚೋಳೂರುಪಾಳ್ಯ 7ನೇ ಮತ್ತು 8ನೇ ಮುಖ್ಯರಸ್ತೆಯಲ್ಲಿ ನೀರಿನ ಸಮಸ್ಯೆ ಹಾಗೂ ಬೀದಿ ದೀಪಗಳ ಸಮಸ್ಯೆ ಇದ್ದು ಸಂಬಂದಪಟ್ಟ BWSSB ಮತ್ತು BESCOM ಅಧಿಕಾರಿಯವರಿಗೆ ಸೂಚಿಸಿರುವುದಾಗಿ ಕಾರ್ಯದರ್ಶಿ ರವರು ನೋಡಲ್ ಅಧಿಕಾರಿ ರವರ ಗಮನಕ್ಕೆ ತಂದರು.
4. ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸಲಾಗಿ, ಹೋಟೆಲ್ ಮಾಲೀಕರಿಗೆ ಕಸವನ್ನು ಕಸದ ವಾಹನದಲ್ಲಿ ಹಾಕಲು ಹಾಗೂ ಸಾರ್ವಜನಿಕರಿಗೆ ರಸ್ತೆಯಲ್ಲಿ ಕಸವನ್ನು ಹಾಕದಂತೆ ನಿರಂತರವಾಗಿ ತಿಳುವಳಿಕೆ ನೀಡುತ್ತಿರುವುದಾಗಿ ಆರೋಗ್ಯ ಪರಿವೀಕ್ಷಕರು ನೋಡಲ್ ಅಧಿಕಾರಿ ರವರಿಗೆ ತಿಳಿಸಿದರು.

5. ಬೆಂಗಳೂರು 1, ಪೈಪ್‌ಲೈನ್ ರಸ್ತೆಯಲ್ಲಿ ಮಳೆ ನೀರು ನಿಂತು ರಸ್ತೆಗಳು ಹಾಳಾಗಿದ್ದು, ನಗರೋತ್ಥಾನ ಅನುದಾನದಲ್ಲಿ ರಸ್ತೆ ಕಾಮಗಾರಿಯನ್ನು ನಿರ್ವಹಿಸುವುದಾಗಿ ಕಾರ್ಯದರ್ಶಿ ರವರು ನೋಡಲ್ ಅಧಿಕಾರಿ ರವರು ಗಮನಕ್ಕೆ ತಂದರು.

6. ವಿಷ್ಣುವರ್ಧನ್ ಪಾರ್ಕ್, ಶಾಂತಿ ಸಾಗರ್ ಹೋಟೆಲ್ ಪಾರ್ಕ್, Hot coffee Park, GT Mall Park ಗಣೇಶ ದೇವಸ್ಥಾನ ಹತ್ತಿರ ಇರುವ ಪಾರ್ಕ್ ಸ್ವಚ್ಛಗೊಳಿಸುವುದಾಗಿ ತೋಟಗಾರಿಕೆ ಇಲಾಖೆಯ ಅಧಿಕಾರಿಯವರು ಸಭೆಗೆ ತಿಳಿಸಿದರು.

7. ವಾರ್ಡ್‌ನಲ್ಲಿ De-Silting ಕಾಮಗಾರಿಯನ್ನು ನಿರ್ವಹಿಸಲು ನೋಡಲ್ ಅಧಿಕಾರಿ ರವರು ಕಾರ್ಯದರ್ಶಿಗಳಿಗೆ ಸೂಚಿಸಿದರು.

8. Giraffe Park ಬಳಿ ಇರುವ ಮಣ್ಣನ್ನು ತೆರವುಗೊಳಿಸಿಕೊಡಲು ಕಿರಿಯ ಆರೋಗ್ಯ ಪರಿವೀಕ್ಷಕರು ಕಾರ್ಯದರ್ಶಿ ರವರಿಗೆ ಕೋರಿದರು, ಅದಕ್ಕೆ ಕಾರ್ಯದರ್ಶಿ ರವರು ತೆರವುಗೊಳಿಸುವುದಾಗಿ ಸಭೆಗೆ ತಿಳಿಸಿದರು.

9. Plastic ನಿಷೇದದ ವಿಚಾರದ ಬಗ್ಗೆ ಚರ್ಚಿಸಲಾಗಿ, Marshal (ವಾ–157) ರವರು ಅಂಗಡಿ ಮಾಲೀಕರಿಗೆ ದಂಡ ವಿಧಿಸುತ್ತಿರುವುದಾಗಿ ಹಾಗೂ Plastic Bag ತಯಾರಿಕೆ ಮಾಡುವ ಅಂಗಡಿ ಮಾಲೀಕರನ್ನು ಗುರುತಿಸಿ ದಂಡ ವಿಧಿಸುವುದಾಗಿ ನೋಡಲ್ ಅಧಿಕಾರಿಯವರ ಗಮನಕ್ಕೆ ತಂದರು.

10. ಪಾಲಿಕೆ ಬಜಾರ್ ಕಾಮಗಾರಿಯ ಬಗ್ಗೆ ಚರ್ಚಿಸಲಾಗಿ, 2ನೇ ಹಂತದ ಕಾಮಗಾರಿಯು ಕೈಗೊಂಡಿದ್ದು ಅತಿ ಶೀಘ್ರವಾಗಿ ಕಾಮಗಾರಿಯನ್ನು ಪೂರ್ಣಗೊಳಿಸುವುದಾಗಿ ಕಾರ್ಯದರ್ಶಿಯವರು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ.ಎಸ್.ಕೆ.ಹೇಮಂತ್ ಕುಮಾರ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಡಿ.ಕೆ ಬಾಬು)

**ಸದಸ್ಯ ಕಾರ್ಯದರ್ಶಿ–ವಾರ್ಡ್ 157**
**ಹಾಗೂ ಸಹಾಯಕ ಅಭಿಯಂತರರು,**

**ನೋಡಲ್ ಅಧಿಕಾರಿ ವಾರ್ಡ್–157**

ಪ್ರತಿಯನ್ನು:–

1) ಜಂಟಿ ಆಯುಕ್ತರು, ದಕ್ಷಿಣ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
2) ಕಾರ್ಯಪಾಲಕ ಅಭಿಯಂತರರು (ವಿಜಯನಗರ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿಜಯನಗರ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಂದಾಯ ಅಧಿಕಾರಿ (ವಿಜಯನಗರ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.157 ರವರ ಮಾಹಿತಿಗಾಗಿ
6) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7) ಸಹಾಯಕ ಅಭಿಯಂತರರು ವಿದ್ಯುತ್ (ಬೀದಿ ದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
8) ಕಛೇರಿ ಕಡತಕ್ಕೆ.